**All India Radio: Bangalore**
**Regional Bulletin In Kannada**
**13.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.02.2026 / 2.30 p.m.**
**<><><><>**

ಮುಖ್ಯಾಂಶಗಳು

1. ಸ್ಥಿರ ರಾಷ್ಟ್ರದ ಅಭಿವೃದ್ಧಿಗೆ ಅಣೆಕಟ್ಟು ಸುರಕ್ಷತೆ ಅಗತ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ
2. ಶಾಸಕ ಬೈರತಿ ಬಸವರಾಜ ವಿರುದ್ಧ ಕಾನೂನಿನ ಪ್ರಕಾರ ಕ್ರಮ ; ಗೃಹ ಸಚಿವ ಡಾ.ಜಿ. ಪರಮೇಶ್ವರ್
3. ನಾಳೆ ಹಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಾಧನಾ ಸಮಾವೇಶ
4. ಹೊಸಕೋಟೆ ಬಳಿ ಸರಣಿ ರಸ್ತೆ ಅಪಘಾತ ; ೭ ಮಂದಿ ಸಾವು

<><><><>

ವ್ಯವಸ್ಥಿತ ಅಣೆಕಟ್ಟು ಸುರಕ್ಷತೆ ಪುನರುಜ್ಜೀವನ ಮತ್ತು ಆಧುನಿಕ ಕಾರ್ಯಾಚರಣೆಗಳು ಸುಸ್ಥಿರ ರಾಷ್ಟ್ರದ ಅಭಿವೃದ್ಧಿಗೆ ಅವಶ್ಯಕತೆಗಳಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಆಯೋಜಿಸಿದ್ದ ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನ ೨೦೨೬ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ದೇಶದಲ್ಲಿ ಶೇಕಡ ೭೦ರಷ್ಟು ಅಣೆಕಟ್ಟುಗಳು ೨೫ ವರ್ಷಗಳಿಗೂ ಮೇಲ್ಪಟ್ಟ ಹಳೆಯದಾಗಿದ್ದು, ಇವುಗಳ ವ್ಯವಸ್ಥಿತ ಸುರಕ್ಷತೆ ಕುರಿತು ಗಮನ ಹರಿಸಬೇಕಾಗಿದೆ. ಅಣೆಕಟ್ಟುಗಳು ಈಗ ಡಿಜಿಟಲ್ ವ್ಯವಸ್ಥೆಯಿಂದ ಕಾರ್ಯ ನಿರ್ವಹಿಸುತ್ತಿದ್ದು, ಭದ್ರತೆಯಲ್ಲಿ ಗುಪ್ತಚರ ವ್ಯವಸ್ಥೆಗಳ ಅಗತ್ಯವಿದೆ ಎಂದರು. ದೇಶದಲ್ಲಿ ಅತಿ ಹೆಚ್ಚು ಅಣೆಕಟ್ಟು ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕವು ಒಂದಾಗಿದೆ, ರಾಜ್ಯದಲ್ಲಿ ೨೩೧ ಅಣೆಕಟ್ಟುಗಳಿದ್ದು, ದೇಶದಲ್ಲಿ ೬ನೇ ಸ್ಥಾನದಲ್ಲಿದೆ. ಮೈಸೂರು ಮಹಾರಾಜರು ವಿಶೇಷವಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್, ಬರಡು ಪ್ರದೇಶಗಳನ್ನು ಫಲವತ್ತಾದ ಬಯಲುಗಳಾಗಿ ಪರಿವರ್ತಿಸಿದರು. ನಂತರ ದೇವರಾಜ ಅರಸು ಆಡಳಿತದಿಂದ ಇಲ್ಲಿಯವರೆಗೂ ಸಮಾನ ಪ್ರಾದೇಶಿಕ ಅಭಿವೃದ್ಧಿಗಾಗಿ ನೀರಾವರಿ ವ್ಯವಸ್ಥೆಯ ವಿಸ್ತರಣೆಗೆ ಆದ್ಯತೆ ನೀಡಲಾಗಿದೆ ಎಂದರು. ಅಣೆಕಟ್ಟುಗಳು

ಕರ್ನಾಟಕವನ್ನು ಸಾಮಾಜಿಕ, ಆರ್ಥಿಕ ಸ್ಥಿತಿಯನ್ನಲ್ಲದೇ ಪರಿಸರವನ್ನು ಮಾರ್ಪಡಿಸಿವೆ. ಮುಂಗಾರಿನ ಅನಿಶ್ಚಿತತೆಯನ್ನು ಪರಿವರ್ತಿಸುವಲ್ಲಿ ಯಶಸ್ವಿಯಾಗಿದೆ. ಜಲವಿದ್ಯುತ್ ಮತ್ತು ಬಹುಪಯೋಗಿ ಜಲಾಶಯಗಳು ಅಪಾರ ಶಕ್ತಿ ಮತ್ತು ನೀರಿನ ಭದ್ರತೆ ಒದಗಿಸುತ್ತಿವೆ. ಕರ್ನಾಟಕದಲ್ಲಿ ೪ ಸಾವಿರದ ೮೦೦ ಮೇಗಾವ್ಯಾಟ್ ವಿದ್ಯುತ್ ಸಾಮರ್ಥ್ಯವಿದ್ದು, ರಾಜ್ಯದ ಜಲಾಶಯಗಳಲ್ಲಿ ನೂರಾರು ಟಿಎಂಸಿ ಅಡಿ ನೀರನ್ನು ಸಂಗ್ರಹಿಸಬಹುದಾಗಿದೆ ಎಂದರು. ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ್‌ಭೂಷಣ್ ಚೌಧರಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

<><><>

ಅಪರಾಧ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಶಾಸಕ ಬೈರತಿ ಬಸವರಾಜು ವಿರುದ್ಧ ಪೊಲೀಸರು ಕಾನೂನು ಕ್ರಮ ಕೈಗೊಂಡಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕೋರ್ಟ್ ಆದೇಶ ಪ್ರಶ್ನಿಸಿ ಬಸವರಾಜು ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿ ವಜಾ ಹಿನ್ನೆಲೆಯಲ್ಲಿ ಅವರನ್ನು ಪೊಲೀಸರು ಬಂಧಿಸಿದ್ದು, ವಿಚಾರಣೆ ನಡೆಸುತ್ತಿದ್ದಾರೆ ಎಂದರು. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರದಲ್ಲಿ ಮೌನವಾಗಿರುವಂತೆ ಎಐಸಿಸಿ ಪಕ್ಷದ ನಾಯಕರಿಗೆ ಸೂಚನೆ ನೀಡಿದ್ದು, ಸೂಕ್ತ ಸಂದರ್ಭದಲ್ಲಿ ತೀರ್ಮಾನ ಕೈಗೊಳ್ಳಲಿದೆ ಎಂದರು. ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಸೂಕ್ತ, ಸುರಕ್ಷತಾ ಕ್ರಮಗಳೊಂದಿಗೆ ಬೆಂಗಳೂರಿನಲ್ಲಿ ಐಪಿಎಲ್ ಪುನರಾರಂಭಕ್ಕೆ ರಾಜ್ಯ ಸಚಿವ ಸಂಪುಟ ಅನುಮತಿ ನೀಡಿರುವುದಾಗಿ ತಿಳಿಸಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಹಾವೇರಿಯಲ್ಲಿ ಜರುಗಲಿರುವ ರಾಜ್ಯ ಸರ್ಕಾರದ ಸಾಧನಾ ಸಮಾವೇಶ ಹಾಗೂ ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಸಮಾವೇಶದಲ್ಲಿ ಲಕ್ಷಕ್ಕೂ ಹೆಚ್ಚು ಮಂದಿಗೆ ಹಕ್ಕುಪತ್ರಗಳನ್ನು ವಿತರಿಸಲಾಗುತ್ತಿದ್ದು, ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಸಚಿವರು, ಶಾಸಕರು ಹಾಗೂ ಗಣ್ಯರು ಕುಳಿತುಕೊಳ್ಳಲು ವೇದಿಕೆ ಸಿದ್ಧಪಡಿಸಲಾಗಿದ್ದು, ಜನರ ಪ್ರಯಾಣಕ್ಕೆ ಜಿಲ್ಲೆಯಲ್ಲಿ ೧೨೫ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಸಮಾವೇಶಕ್ಕೆ ಬರುವ ಜನರ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಜೊತೆಗೆ ಕಾನೂನು

ಸುವ್ಯವಸ್ಥೆಗೆ ಧಕ್ಕೆ ತರುವ ವ್ಯಕ್ತಿಗಳ ಬಗ್ಗೆಯೂ ನಿಗಾ ವಹಿಸಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಸಮಾವೇಶದ ಪ್ರತಿಯೊಂದು ದೃಶ್ಯಗಳನ್ನು ಸೆರೆ ಹಿಡಿಯಲು ೬೦ ಸಿ.ಸಿ.ಟಿ.ವಿ ಕ್ಯಾಮೆರಾಗಳ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><>

೧೯೫೧ರ ಪ್ರಜಾಪ್ರತಿನಿಧಿ ಕಾಯ್ದೆಯ ಸೆಕ್ಷನ್ ೬೨(೫) ಕ್ಕೆ ತಿದ್ದುಪಡಿ ತರುವ ಮೂಲಕ ವಿಚಾರಣಾಧೀನ ಕೈದಿಗಳಿಗೆ ಮತದಾನದ ಹಕ್ಕು ನೀಡಬೇಕೆಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನದ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶದ ಜೈಲುಗಳಲ್ಲಿರುವ ಸುಮಾರು ೪ ಲಕ್ಷದ ೯ ಸಾವಿರ ಕೈದಿಗಳಲ್ಲಿ ಶೇಕಡ ೭೭ ಕ್ಕೂ ಹೆಚ್ಚು ಅಂದರೆ ಸುಮಾರು ೩ ಲಕ್ಷದ ೮ ಸಾವಿರ ಜನರು ವಿಚಾರಣಾಧೀನ ಕೈದಿಗಳಾಗಿದ್ದಾರೆ ಎಂದು ತಿಳಿಸಿದರು. ಕಾನೂನಿನ ದೃಷ್ಟಿಯಲ್ಲಿ ಇನ್ನೂ 'ನಿರ್ದೋಷಿ'ಯಾಗಿಯೇ ಇರುವ ವಿಚಾರಣಾಧೀನ ಕೈದಿಗಳಿಗೆ ಮತದಾನದ ಹಕ್ಕಿಲ್ಲ. ಈ ತಾರತಮ್ಯವನ್ನು ಹೋಗಲಾಡಿಸಲು ೧೯೫೧ರ ಪ್ರಜಾಪ್ರತಿನಿಧಿ ಕಾಯ್ದೆಯ ಸೆಕ್ಷನ್ ೬೨(೫) ಕ್ಕೆ ತಿದ್ದುಪಡಿ ತರುವುದು ಅಗತ್ಯವಾಗಿದೆ ಎಂದು ಅವರು ಸದನದ ಗಮನ ಸೆಳೆದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಎಂ ಸತ್ಯವರ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಬೆಳಿಗ್ಗೆ ಸಂಭವಿಸಿದ ತೀವ್ರ ರಸ್ತೆ ಅಪಘಾತದಲ್ಲಿ ಏಳು ಮಂದಿ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಕಾರು, ಬೈಕ್ ಹಾಗೂ ಕ್ಯಾಂಟರ್ ನಡುವೆ ಸರಣಿ ಅಪಘಾತ ಸಂಭವಿಸಿದ್ದು, ಕಾರಿನಲ್ಲಿದ್ದ ಆರು ಜನ ಹಾಗೂ ಬೈಕ್ ಸವಾರ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಕ್ಯಾಂಟರ್ ವಾಹನ ಮುಗುಚಿ ಬಿದ್ದಿದ್ದು, ಚಾಲಕನಿಗೆ ತೀವ್ರ ಗಾಯಗಳಾಗಿವೆ. ಮೃತದೇಹಗಳನ್ನು ಹೊಸಕೋಟೆಯ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಸ್ಥಳಕ್ಕೆ ಐಜಿಪಿ ಲಾಭೂ ರಾಮ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><>

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ವಿಕಸಿತ ಭಾರತ ಜಿ-ರಾಮ್-ಜಿ ಎಂಬ ಹೊಸ ಕಾಯ್ದೆ ಗ್ರಾಮೀಣಾಭಿವೃದ್ಧಿಗೆ ಸಹಕಾರಿಯಾಗಿದೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ

ಅಶೋಕ್ ಹೇಳಿದರು. ಮದ್ದೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಯೋಜನೆಯು ಅತ್ಯಂತ ಪಾರದರ್ಶಕತೆ, ಉತ್ತಮ ಕಾರ್ಮಿಕ ನೀತಿ, ಹಳ್ಳಿಗಳ ಸರ್ವಾಂಗೀಣ ಅಭಿವೃದ್ಧಿ ಉದ್ದೇಶ ಒಳಗೊಂಡಿದೆ ಎಂದು ತಿಳಿಸಿದ್ದಾರೆ. ನರೇಗಾ ಯೋಜನೆಯಡಿ ಫಲಾನುಭವಿಗಳಿಗೆ ಪ್ರತಿ ವರ್ಷ ೧೦೦ ದಿನಗಳ ಉದ್ಯೋಗ ಖಾತರಿ ಸಿಗುತ್ತಿತ್ತು. ಆದರೆ ವಿಬಿ ಜಿ-ರಾಮ್-ಜಿ ಯೋಜನೆಯಡಿ ೧೨೫ ದಿನಗಳ ಖಾತರಿ ಉದ್ಯೋಗ ಸಿಗಲಿದೆ. ಗ್ರಾಮೀಣ ಮೂಲಸೌಕರ್ಯ ವ್ಯವಸ್ಥೆ ಸುಧಾರಿಸಲಿದೆ ಎಂದು ತಿಳಿಸಿದರು.

<><><><>

ಈ ಬಾರಿಯ ರಾಜ್ಯ ಬಜೆಟ್‌ನಲ್ಲಿ ಕರಾವಳಿ ಜಿಲ್ಲೆಗಳ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯ ಅನುದಾನವನ್ನು ಮುಂದಿನ ರಾಜ್ಯ ಬಜೆಟ್‌ನಲ್ಲಿ ಮೀಸಲಿಡಬೇಕು ಎಂದು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಜನಪ್ರತಿನಿಧಿಗಳು ಆಗ್ರಹಿಸಿದ್ದಾರೆ. ಕರಾವಳಿ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಸಚಿವರು, ಶಾಸಕರು ಭಾಗವಹಿಸಿ, ಕರಾವಳಿಯ ಅಭಿವೃದ್ಧಿಯನ್ನು ಸಮಗ್ರವಾಗಿ ಪರಿಗಣಿಸಿ, ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು. ವಿಧಾನಸಭಾ ಅಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ಕಡಲ್ಕೊರೆತ ನಿಯಂತ್ರಣಕ್ಕೆ ಕಡಲತೀರ ಪ್ರದೇಶದಲ್ಲಿ ಉತ್ತಮ ಗುಣಮಟ್ಟದ ರಸ್ತೆಗಳನ್ನು ಎತ್ತರದಲ್ಲಿ ನಿರ್ಮಿಸಿದರೆ, ಕೊರೆತ ತಡೆಯುವುದರೊಂದಿಗೆ, ಸಂಚಾರ ವ್ಯವಸ್ಥೆ ಸುಧಾರಣೆಗೂ ಸಹಕಾರಿಯಾಗಲಿದೆ. ಇದು ಇಲ್ಲಿನ ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೂ ಸಹಕಾರಿಯಾಗಲಿದೆ ಎಂದು ಹೇಳಿದರು. ಮೀನುಗಾರಿಕೆ ಮತ್ತು ಬಂದರು ಸಚಿವ ಮಂಕಾಳ ಎಸ್. ವೈದ್ಯ ಮಾತನಾಡಿ, ಕರಾವಳಿಯ ೩ ಜಿಲ್ಲೆಗಳ ೧೩ ಮೀನುಗಾರಿಕೆ ಬಂದರುಗಳ ವ್ಯಾಪ್ತಿಯಲ್ಲಿ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ಹೂಳೆತ್ತಲು ನಿರ್ಧರಿಸಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿದ್ದು, ಅನುದಾನ ಸಿಗುವ ನಿರೀಕ್ಷೆ ಇದೆ ಎಂದರು.

<><><><>

ಇಂದು ಸಂಜೆ ಉದ್ಘಾಟನೆಗೊಳ್ಳಲಿರುವ ಹಂಪಿ ಉತ್ಸವದ ಭಾಗವಾಗಿ ಇಂದು ಬೆಳಗ್ಗೆ ವಿಜಯನಗರದ ಕಮಲಾಪುರದಲ್ಲಿ ಜೋಡೆತ್ತುಗಳ ಪ್ರದರ್ಶನ ಆಯೋಜಿಸಲಾಗಿತ್ತು. ಈ ಬಾರಿಯ ೧೮೦ ಜೋಡೆತ್ತುಗಳ ಪ್ರದರ್ಶನ ಆಕರ್ಷಣೀಯವಾಗಿತ್ತು. ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ ರೈತರು ಕಿಲಾರಿ ಹಳ್ಳಿಕಾರ್ ಸೇರಿದಂತೆ ವಿವಿಧ ಜಾತಿಯ ತಮ್ಮ ರಾಸುಗಳ

ಪ್ರದರ್ಶನ ನಡೆಸಿದರು. ಈ ಕುರಿತು ಪಶುಸಂಗೋಪನಾ  ಇಲಾಖೆಯ ಉಪನಿರ್ದೇಶಕ ರವಿಯವರು ಆಕಾಶವಾಣಿಯೊಂದಿಗೆ ಹೆಚ್ಚಿನ ಮಾಹಿತಿ ಹಂಚಿಕೊಂಡರು.

ಧ್ವನಿ : ಉಪನಿರ್ದೇಶಕ ರವಿ

<><><>

ಸಾರಿಗೆ ನಿಯಮಗಳನ್ನು ಉಲ್ಲಂಘಿಸುವ ಖಾಸಗಿ ವಾಹನಗಳ ಲೈಸೆನ್ಸ್‌ಗಳನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದ್ದಾರೆ. ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸಾರಿಗೆ ಸಂಸ್ಥೆಯ ಬಸ್‌ಗಳಿಗೆ ಜಿಲ್ಲೆಯ ಗ್ರಾಮೀಣ ಪ್ರದೇಶದ ೪೦೦ ಕ್ಕೂ ಅಧಿಕ ಮಾರ್ಗಗಳಲ್ಲಿ ಸಂಚರಿಸಲು ಅನುಮತಿಯನ್ನು ನೀಡಿದರು.

<><><>

ಪ್ರಸಿದ್ಧ ಟಿಸಿಎಸ್ ವರ್ಲ್ಡ್-೧೦ಕೆ ಮ್ಯಾರಥಾನ್ ಏಪ್ರಿಲ್ ೨೬ರಂದು ಬೆಂಗಳೂರಿನಲ್ಲಿ ನಡೆಯಲಿದೆ. ಸುಮಾರು ಎರಡು ದಶಕಗಳಿಂದ ಬೆಂಗಳೂರಿನಲ್ಲಿ ಅಭಿಯಾನ ರೀತಿಯಲ್ಲಿ ಪ್ರೋಕ್ಯಾಮ್ ಇಂಟರ್ ನ್ಯಾಷನಲ್ ಈ ಓಟವನ್ನು ಆಯೋಜಿಸಿತ್ತಾ ಬಂದಿದ್ದು, ಈ ಬಾರಿಯ ಮ್ಯಾರಥಾನ್  ದಿನಾಂಕವನ್ನು ಘೋಷಿಸಿದೆ.

<><><>

ಬಾಗಲಕೋಟೆ ಜಿಲ್ಲೆಯಲ್ಲಿ ಹಾವು ಮತ್ತು ನಾಯಿ ಕಡಿತ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಅವುಗಳ ನಿಯಂತ್ರಣಕ್ಕೆ ಮುಂದಾಗುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ, ಜಿಲ್ಲಾಧಿಕಾರಿ ಸಂಗಪ್ಪ ಸೂಚನೆ ನೀಡಿದ್ದಾರೆ. ಜಿಲ್ಲಾ ಕಣ್ಗಾವಲು ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಹಾವು ಕಡಿತ ಕಡಿತದಂತಹ ತುರ್ತು ಪರಿಸ್ಥಿತಿಗಳಲ್ಲಿ ಪ್ರಾಥಮಿಕ ಚಿಕಿತ್ಸೆ, ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ಕರೆದೊಯ್ದು ಸೂಕ್ತ ಚಿಕಿತ್ಸೆ ಒದಗಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದರು. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವಾಗಬೇಕೆಂದು ಜಿಲ್ಲಾಧಿಕಾರಿ ತಿಳಿಸಿದರು.

<><><>

ಮಂಡ್ಯ ಜಿಲ್ಲೆ  ಶ್ರೀರಂಗಪಟ್ಟಣ ತಾಲೂಕಿನ ಬಂಗಾರದೊಡ್ಡಿ ನಾಲೆಯ ಬಳಿ ಕಾವೇರಿ ನದಿ ಪಾತ್ರದ ಬಫರ್ ವಲಯ ಒತ್ತುವರಿ ಆರೋಪ ಹಿನ್ನೆಲೆಯಲ್ಲಿ ಎರಡು ಹೋಂಸ್ಟೇಗಳ ಲೈಸೆನ್ಸ್ ರದ್ದುಗೊಳಿಸಿ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಆದೇಶಿಸಿದ್ದಾರೆ. ಕಾವೇರಿ ನದಿಯ ಬಫರ್ ವಲಯವನ್ನು ಅತಿಕ್ರಮಿಸಿಕೊಂಡು ಹೋಂಸ್ಟೇ ನಿರ್ಮಿಸಿರುವುದರ ವಿರುದ್ಧ ಸ್ವಯಂಪ್ರೇರಿತ ಪ್ರಕರಣ

ದಾಖಲಿಸಿಕೊಂಡಿದ್ದ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು, ಒತ್ತುವರಿ ತೆರವಿಗೆ ಕ್ರಮ ವಹಿಸುವಂತೆ ಸೂಚಿಸಿದ್ದರು. ಹೈಕೋರ್ಟ್ ಆದೇಶದ ಮೇರೆಗೆ ಕಾರಣ ಕೇಳಿ ನೋಟಿಸ್ ನೀಡಲಾಗಿತ್ತು. ನೋಟಿಸ್‌ಗೆ ಸಮರ್ಪಕ ಉತ್ತರ ಬಾರದ ಹಿನ್ನೆಲೆಯಲ್ಲಿ ಎರಡು ಹೋಂಸ್ಟೇ ಲೈಸೆನ್ಸ್‌ಗಳನ್ನು ರದ್ದುಪಡಿಸಿ ಆದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>